ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 17/12/2019

# ರಾಜ್ಯಕ್ಕೆ 3,669 ಕೋಟಿ ಜಿಎಸ್‌ಟಿ ಪರಿಹಾರ

17/12/19

ನವದೆಹಲಿ: ಕೇಂದ್ರ ಸರ್ಕಾರ ವಿವಿಧ ರಾಜ್ಯಗಳಿಗೆ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಜಿಎಸ್‌ಟಿ ಜಾರಿಯ ಬಳಿಕ ಪರಿಹಾರ ನೀಡಿಕೆಯ ಅನ್ವಯ ಸೋಮವಾರ ಒಟ್ಟು 35, 298 ಕೋಟಿ ರೂ. ಬಿಡುಗಡೆ ಮಾಡಿದ್ದು, ಅದರಲ್ಲಿ ಕರ್ನಾಟಕಕ್ಕೆ 3,669 ಕೋಟಿ ರೂ. ನೀಡಲಾಗಿದೆ. ಆಗಸ್ಟ್-ಸೆಪ್ಟೆಂಬರ್ ಅವಧಿಯಲ್ಲಿನ ನಷ್ಟ ಪರಿಹಾರ ಇದಾಗಿದೆ. ಬುಧವಾರ (ಡಿ.18)ರಂದು ನವದೆಹಲಿಯಲ್ಲಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ 38ನೇ ಜಿಎಸ್‌ಟಿ ಮಂಡಳಿ ಸಭೆ ನಡೆಯುವುದಕ್ಕೆ ಮುಂಚಿತವಾಗಿ ಈ ಮೊತ್ತ ಬಿಡುಗಡೆ ಮಾಡಲಾಗಿದೆ. ಎನ್‌ಡಿಎಯೇತರ ರಾಜ್ಯ ಸರ್ಕಾರಗಳ ಮುಖ್ಯಮಂತ್ರಿಗಳು ಇತ್ತೀಚೆಗಷ್ಟೇ ವಿತ್ತ ಸಚಿವ ನಿರ್ಮಲಾರನ್ನು ಭೇಟಿ ಈ ಬಗ್ಗೆ ಮನವಿ ಮಾಡಿದ್ದರು. ಪ್ರತಿಪಕ್ಷಗಳು ಆಡಳಿತ ನಡೆಸುವ ರಾಜ್ಯ ಸರ್ಕಾರಗಳು ವಾದಿಸುವ ಪ್ರಕಾರ ಕೇಂದ್ರದಿಂದ 50 ಸಾವಿರ ಕೋಟಿ ರೂ. ಬಾಕಿ ಇದೆ. 18ರ ಸಭೆಯಲ್ಲಿ ಜಿಎಸ್‌ಟಿ ಪರಿಹಾರ ನೀಡಿಕೆ, ಪರಿಹಾರ ಸೆಸ್ ಬಗ್ಗೆ ಚರ್ಚೆಯಾಗುವ ಸಾಧ್ಯತೆ ಇದೆ.